ಮತ್ತು ಸರ್ವೆ ನಂ. 135 ರಲ್ಲಿದ್ದ 19 ಎಕರೆ ಜಮೀನಿನ ಗುತ್ತಿಗೆ ಅವಧಿಯು ಇನ್ನು 7 ವರ್ಷಗಳಲ್ಲಿ ಮುಕ್ತಾಯಗೊಳ್ಳಲಿದೆ. ಅಲ್ಲದೆ, ವಿವಿಧ ಕಾನೂನುಗಳು ಮತ್ತು ಗುತ್ತಿಗೆ ಷರತ್ತುಗಳನ್ನು ಹಲವು ಬಾರಿ ಉಲ್ಲಂಘಿಸಿರುವುದು ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ, ಸದರಿ ಸಂಸ್ಥೆಯು 290 ಎಕರೆ 38 ಗುಂಟೆ ಅಥವಾ ಅದಕ್ಕಿಂತ ಹೆಚ್ಚಿನ ಜಮೀನನ್ನು ತನ್ನ ವಶದಲ್ಲಿ ಇಟ್ಟುಕೊಂಡಿದೆಯೇ, ಈ ಜಮೀನನ್ನು ಯಾವ ರೀತಿಯಲ್ಲಿ ವಶಪಡಿಸಿಕೊಳ್ಳಲಾಗಿದೆ, ಕಾನೂನಿನ ಮತ್ತು ಗುತ್ತಿಗೆ ಷರತ್ತುಗಳ ಏನೇನು ಉಲ್ಲಂಘನೆಗಳಾಗಿವೆ, ಮತ್ತು ಮಂಜೂರಾದ / ಹರಾಜಾದ ಯಾವುದೇ ಜಮೀನನ್ನು ಕಾನೂನು ಉಲ್ಲಂಘಿಸಿ ಒತ್ತುವರಿ ಮಾಡಲಾಗಿದೆಯೇ ಅಥವಾ ವಶಕ್ಕೆ ಪಡೆಯಲಾಗಿದೆಯೇ ಎಂಬುದನ್ನು ತನಿಖೆ ಮಾಡಲು ಹಾಗೂ ಸರ್ಕಾರಿ ಆಸ್ತಿ ಮತ್ತು ಸಾರ್ವಜನಿಕ ಉಪಯೋಗಿ ಜಮೀನುಗಳನ್ನು ರಕ್ಷಿಸಲು ಕೈಗೊಳ್ಳಬೇಕಾದ ಕಾನೂನಾತ್ಮಕ ಮತ್ತು ಆಡಳಿತಾತ್ಮಕ ಕ್ರಮಗಳ ಬಗ್ಗೆ ವರದಿ ಸಲ್ಲಿಸಲು ಸರ್ಕಾರವು ಒಂದು 'ವಿಶೇಷ ತನಿಖಾ ತಂಡ'(ಎಸ್ಐಟಿ)ವನ್ನು ರಚಿಸಲು ನಿರ್ಧರಿಸಿದೆ. ಅದರಂತೆ ಈ ಆದೇಶ:

**<u>ಸರ್ಕಾರದ ಆದೇಶ ಸಂಖ್ಯೆ: RD-LGB/253/2026 (E- 2225482)</u>**

**<u>ಬೆಂಗಳೂರು, ದಿನಾಂಕ: 17.07.2026.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 195 ಮತ್ತು ಕರ್ನಾಟಕ ಭೂ ಕಬಳಿಕೆ ನಿಷೇಧ (ಕಾಯ್ದೆ), 2011ರ ಕಲಂ 8ರ ಅಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಕಗ್ಗಲೀಪುರ ಗ್ರಾಮದ ಸರ್ವೆ ನಂ. 46 ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಆರ್ಟ್ ಆಫ್ ಲಿವಿಂಗ್ ಮತ್ತು ಅದರ ಅಂಗಸಂಸ್ಥೆಗಳು, ವೇದ ವಿಜ್ಞಾನ ಮಹಾ ವಿದ್ಯಾಪೀಠ ಇನ್‌ಸ್ಟಿಟ್ಯೂಟ್, ಸುಮೇರು ಗ್ಲೋಬಲ್ ಸಪೋರ್ಟ್ ಸಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್, ಸುಮೇರು ರಿಯಾಲ್ಟಿ ಪ್ರೈ. ಲಿ. ಹಾಗೂ ರಿಟ್ ಅರ್ಜಿ ಸಂಖ್ಯೆ 15264/2023ರ ಇತರೆ ಪಕ್ಷಕಾರರು ಮತ್ತು ಸರ್ಕಾರಿ ಜಮೀನುಗಳನ್ನು ವಶದಲ್ಲಿಟ್ಟುಕೊಂಡಿರುವ ಇತರೆ ವ್ಯಕ್ತಿಗಳು/ಸಂಸ್ಥೆಗಳಿಂದ ಆಗಿರುವ ಭೂ ಒತ್ತುವರಿಯ ಆಪಾದನೆಯ ಕುರಿತು ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಲು, ಈ ಕೆಳಕಂಡ ಅಧಿಕಾರಿಗಳನ್ನೊಳಗೊಂಡ 'ವಿಶೇಷ ತನಿಖಾ ತಂಡ'ವನ್ನು ರಚಿಸಲಾಗಿದೆ.

| ಕ್ರಮ ಸಂಖ್ಯೆ | ಅಧಿಕಾರಿಯ ಹೆಸರು ಮತ್ತು ಪದನಾಮ | ಪದನಾಮ |
|---|---|---|
| 1. | ಶ್ರೀ. ಅಮ್ಲನ್ ಅದಿತ್ಯ ಬಿಸ್ವಾಸ್, ಐ.ಎ.ಎಸ್.<br>ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು | ಅಧ್ಯಕ್ಷರು |